ಕರ್ನಾಟಕ ಸರ್ಕಾರ
ಸಮಗ್ರ ಮಕ್ಕಳ ರಕ್ಷಣಾ ಯೋಜನೆ
ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, 1ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01
E-mail ID: icps.kar@gmail.com Ph.No.080-22879381/82

ಸಂಖ್ಯೆ:ಕೆಎಸ್‌ಐಸಿಪಿಎಸ್/ಸಾರಾ/ಸೋ/71/2018-19 ದಿನಾಂಕ: 19-11-2018

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು,
ಎಲ್ಲಾ ಜಿಲ್ಲಾ ಮಕ್ಕಳ ರಕ್ಷಣಾ ಘಟಕ.

ಮಾನ್ಯರೇ,

ವಿಷಯ: ಮಕ್ಕಳ ಪಾಲನಾ ಸಂಸ್ಥೆಗಳಲ್ಲಿರುವ ಗಂಡು ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕ ವಸತಿ ಸೌಕರ್ಯ ವ್ಯವಸ್ಥೆ ಕಲ್ಪಿಸುವ ಬಗ್ಗೆ ಹಾಗೂ ಮಕ್ಕಳಿಲ್ಲದೇ ಮುಚ್ಚಿರುವ ಸಂಸ್ಥೆಗಳನ್ನು ರದ್ದುಗೊಳಿಸುವ ಕುರಿತು.

ಉಲ್ಲೇಖ: ಈ ಕಛೇರಿಯ ಪತ್ರ ಸಂಖ್ಯೆ:ಕೆಎಸ್‌ಐಸಿಪಿಎಸ್/ಸಾರಾ/ಸೋ/68/2015-16, ದಿನಾಂಕ:15.06.2018

***

ಮೇಲಿನ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, CARA ಸಲಹಾ ಸಮಿತಿ ಸದಸ್ಯರುಗಳು, ಮಕ್ಕಳ ಕಲ್ಯಾಣ ಸಮಿತಿ ಸದಸ್ಯರುಗಳು ವಿವಿಧ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿದ ಸಂದರ್ಭಗಳಲ್ಲಿ ಪ್ರೌಢಾವಸ್ಥೆಯಲ್ಲಿರುವ ಗಂಡು ಮತ್ತು ಹೆಣ್ಣು ಮಕ್ಕಳಿಗೆ ಒಂದೇ ಸ್ಥಳದಲ್ಲಿ ವಸತಿ ಸೌಕರ್ಯ ಕಲ್ಪಿಸಿರುವುದನ್ನು ಗಮನಿಸಿದ್ದು, ಪ್ರತ್ಯೇಕ ವಸತಿ ಸೌಕರ್ಯ ಕಲ್ಪಿಸುವಂತೆ ಸೂಚಿಸಿರುತ್ತಾರೆ. ಅದರಂತೆ ಕ್ರಮ ಕೈಗೊಳ್ಳಲು ಈಗಾಗಲೇ ದಿನಾಂಕ:15.06.2018ರಂದು ಸೂಕ್ತ ನಿರ್ದೇಶನ ನೀಡಿ ಪತ್ರ ಬರೆಯಲಾಗಿದೆ.

ಮುಂದುವರೆದಂತೆ ತಮ್ಮ ಜಿಲ್ಲೆಯಲ್ಲಿರುವ ಎಲ್ಲಾ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿ ಪರಿಶೀಲಿಸಿ ಪ್ರತ್ಯೇಕ ವಸತಿ ವ್ಯವಸ್ಥೆ ಕಲ್ಪಿಸಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು ಒಂದುವೇಳೆ ಮಕ್ಕಳು ಒಂದೇ ಸ್ಥಳದಲ್ಲಿದ್ದಲ್ಲಿ ಅವರಿಗೆ ಪ್ರತ್ಯೇಕ ವ್ಯವಸ್ಥೆ ಕಲ್ಪಿಸಲು ಸಮಯಾವಕಾಶ ನೀಡುವುದು. ಆದಾಗ್ಯೂ ಪ್ರತ್ಯೇಕ ವ್ಯವಸ್ಥೆ ಕಲ್ಪಿಸಲು ವಿಫಲವಾದಲ್ಲಿ ಸದರಿ ಸಂಸ್ಥೆಯನ್ನು ರದ್ದುಗೊಳಿಸಲು ಕ್ರಮ ವಹಿಸುವುದು.

ಜಿಲ್ಲೆಯಲ್ಲಿರುವ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಮಕ್ಕಳಿಲ್ಲದಿದ್ದಲ್ಲಿ ಅಂತಹ ಸಂಸ್ಥೆಗಳನ್ನು ರದ್ದುಗೊಳಿಸಲು ಈಗಾಗಲೇ ಸೂಚಿಸಿದ್ದು, ಗೂಗಲ್ ಶೀಟ್‌ನಲ್ಲಿ ಸ್ವೀಕೃತಗೊಂಡಿರುವ ಮಾಹಿತಿಯಂತೆ 118 ಸಂಸ್ಥೆಗಳನ್ನು ರದ್ದುಗೊಳಿಸಬೇಕಾಗಿರುತ್ತದೆ. ಇದುವರೆಗೂ ದಕ್ಷಿಣ ಕನ್ನಡ, ಹಾವೇರಿ ಜಿಲ್ಲೆಗಳನ್ನು ಹೊರತುಪಡಿಸಿ ಬೇರೆ ಜಿಲ್ಲೆಗಳಿಂದ ಪ್ರಸ್ತಾವನೆ ಸ್ವೀಕೃತಗೊಂಡಿರುವುದಿಲ್ಲ. ಈ ಕುರಿತು ಶೀಘ್ರವಾಗಿ ಕ್ರಮ ಕೈಗೊಂಡು ಜಿಲ್ಲಾಧಿಕಾರಿಗಳ ಮೂಲಕ ಕೂಡಲೇ ಮಾನ್ಯತೆ ರದ್ದುಪಡಿಸಿರುವ ಸಂಸ್ಥೆಗಳನ್ನು ಹೊರತುಪಡಿಸಿ ಇನ್ನುಳಿದ ಸಂಸ್ಥೆಗಳನ್ನು ರದ್ದು ಮಾಡಲು ಪ್ರಸ್ತಾವನೆಗಳನ್ನು ಸಲ್ಲಿಸಲು ಸೂಚಿಸಿದೆ. ರದ್ದುಗೊಳಿಸಬೇಕಾಗಿರುವ ಮಕ್ಕಳ ಪಾಲನಾ ಸಂಸ್ಥೆಗಳ ಪಟ್ಟಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು,
ಸಮಗ್ರ ಮಕ್ಕಳ ರಕ್ಷಣಾ ಯೋಜನೆ
ಬೆಂಗಳೂರು

from - KSICPS
...th:- ಮಕ್ಕಳ ಪಾಲನಾ ಸಂಸ್ಥೆಗಳ್ಳ ರುವ
...te- 15/12/18. 1:30pm